# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

### ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1555 (1849)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ದೈಹಿಕ ಶಿಕ್ಷಣ ಶಿಕ್ಷಕರುಗಳ "ವೃಂದ ಮತ್ತು ನೇಮಕಾತಿ" ನಿಯಮಗಳನ್ನು ತಿದ್ದುಪಡಿ ಮಾಡುವ ಕುರಿತು

(ಅ) ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಬೇಕೆನ್ನುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ;

(ಇ) ಸದರಿ ತಿದ್ದುಪಡಿಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಪದನಾಮವನ್ನು ಸಹಶಿಕ್ಷಕರೆಂದು ಬದಲಾಯಿಸಬೇಕೆನ್ನುವ ಅಂಶ ಸೇರ್ಪಡೆಯಾಗಿದೆಯೇ; ಸೇವಾ ಜೇಷ್ಠತೆಯ ಅನ್ವಯ ಸದರಿ ಶಿಕ್ಷಕರುಗಳಿಗೆ ಮುಖ್ಯೋಪಾಧ್ಯಾಯರ ಹುದ್ದೆಗೆ ಬಡ್ತಿ ಹೊಂದಲು ಅವಕಾಶ ಕಲ್ಪಿಸಲಾಗುವುದೇ;

(ಈ) ಸದರಿ ಶಿಕ್ಷಕರುಗಳಿಗೆ ಬಡ್ತಿ ನೀಡುವ ಮೂಲಕ ಬಿ.ಇ.ಓ ಕಛೇರಿಗಳಲ್ಲಿ ಖಾಲಿಯಿರುವ "ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರ" ಹುದ್ದೆಗಳನ್ನು ಮತ್ತು ಡಯಟ್‌ಗಳಲ್ಲಿ ಖಾಲಿಯಿರುವ "ದೈಹಿಕ ಶಿಕ್ಷಣ ಉಪನ್ಯಾಸಕರ" ಹುದ್ದೆಗಳನ್ನು ಭರ್ತಿ ಮಾಡಲಾಗುವುದೇ;

(ಉ) ಇಲ್ಲವಾದಲ್ಲಿ, ಇನ್ನೂ ಮುಂದಾದರೂ ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?